# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕರ್ನಾಟಕ ಗ್ಯಾಸೆಟಿಯರ್ ಇಲಾಖೆಯ 2020-21ನೇ ಸಾಲಿನ ಎರಡನೇ ಕಂತಿನ ಅನುದಾನ ಬಿಡುಗಡೆ ಮಾಡುವ ಬಗ್ಗೆ.

**ಓದಲಾಗಿದೆ:** 1. ಸರ್ಕಾರದ ಆದೇಶ ಸಂಖ್ಯೆ: ಕಸಂವಾ 26 ಕರಾಗೆ ಆಕ 2020, ದಿ: 14.08.2020.
2. ಮುಖ್ಯಸಂಪಾದಕರು, ಕರ್ನಾಟಕ ಗ್ಯಾಸೆಟಿಯರ್ ಇಲಾಖೆ, ಇವರ ಪತ್ರ ಸಂಖ್ಯೆ: ಕಗ್ಯಾಇ/ಇಎಸ್‌ಟಿ-1/47/2019-20/115, ದಿ: 08.09.2020.

---

**ಪ್ರಸ್ತಾವನೆ:**

ಮೇಲೆ (1) ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ 2020-21ನೇ ಸಾಲಿನ ಮೊದಲನೇ ಕಂತಿನ ಅನುದಾನ ರೂ.13.50ಲಕ್ಷಗಳನ್ನು ಮುಖ್ಯಸಂಪಾದಕರು, ಕರ್ನಾಟಕ ಗ್ಯಾಸೆಟಿಯರ್ ಇಲಾಖೆ, ಇವರಿಗೆ ಬಿಡುಗಡೆ ಮಾಡಿ ಆದೇಶವಾಗಿರುತ್ತದೆ.

ಮೇಲೆ (2) ರಲ್ಲಿ ಓದಲಾದ ಪತ್ರದಲ್ಲಿ 2020-21ನೇ ಸಾಲಿನಲ್ಲಿ ಕರ್ನಾಟಕ ಗ್ಯಾಸೆಟಿಯರ್ ಇಲಾಖೆಗೆ ರೂ.148.00ಲಕ್ಷಗಳ ಅನುದಾನ ಒದಗಿಸಲಾಗಿರುತ್ತದೆ. ಮೊದಲನೇ ಕಂತಿನ ಅನುದಾನದಲ್ಲಿ ಲೆಕ್ಕಶೀರ್ಷಿಕೆ:051-ಸಾಮಾನ್ಯ ವೆಚ್ಚಗಳಡಿ ಶೇಕಡಾ 95.50ರಷ್ಟು, 052-ದೂರವಾಣಿ ವೆಚ್ಚಗಳಡಿ ಶೇಕಡಾ 98.00ರಷ್ಟು, 071-ಕಟ್ಟಡ ವೆಚ್ಚಗಳಡಿ ಶೇಕಡಾ 95.89ರಷ್ಟು, 195-ಸಾರಿಗೆ ವೆಚ್ಚಗಳಡಿ ಶೇಕಡಾ 87.25ರಷ್ಟು ವೆಚ್ಚವಾಗಿದ್ದು, ಆದ್ದರಿಂದ ಎರಡನೇ ಕಂತಿನ ಅನುದಾನ ರೂ.10.25ಲಕ್ಷಗಳನ್ನು ಈ ಕೆಳಕಂಡ ಲೆಕ್ಕಶೀರ್ಷಿಕೆಯನ್ವಯ ಬಿಡುಗಡೆ ಮಾಡುವಂತೆ ಸರ್ಕಾರವನ್ನು ಕೋರಿರುತ್ತಾರೆ.

(ರೂ. ಲಕ್ಷಗಳಲ್ಲಿ)

| ಕ್ರ.ಸಂ. | ಲೆಕ್ಕಶೀರ್ಷಿಕೆ ಅಭಿಯಾನ ಸಂಖ್ಯೆ ಇಲಾಖೆ ಮತ್ತು ಪಾಲಿನ ಸಂಕೇತ | ಬಿಡುಗಡೆ ಮಾಡಬೇಕಾದ ಎರಡನೇ ಕಂತಿನ ಅನುದಾನ |
|---|---|---|
| | 3454-02-110-0-01 ಜಿಲ್ಲಾ ಗ್ಯಾಸೆಟಿಯರ್ ಪರಿಷ್ಕರಣೆ | |
| 1 | 051-ಸಾಮಾನ್ಯ ವೆಚ್ಚಗಳು | 1.50 |
| 2 | 052-ದೂರವಾಣಿ ವೆಚ್ಚಗಳು | 0.50 |
| 3 | 071-ಕಟ್ಟಡ ವೆಚ್ಚಗಳು | 7.50 |
| 4 | 195-ಸಾರಿಗೆ ವೆಚ್ಚಗಳು | 0.75 |
| | ಒಟ್ಟು | 10.25 |

ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ಕಸಂವಾ 26 ಕರಾಗೆ ಆಕ 2020 ಬೆಂಗಳೂರು, ದಿನಾಂಕ: 10.09.2020.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಗ್ಯಾಸೆಟಿಯರ್ ಇಲಾಖೆಯ ಮುಂದುವರಿದ ಕಾರ್ಯಕ್ರಮಗಳು/ಯೋಜನೆಗಳನ್ನು ಕೈಗೊಳ್ಳಲು 2020-21ನೇ ಸಾಲಿನಲ್ಲಿ ಈ ಕೆಳಕಂಡ ಲೆಕ್ಕ ಶೀರ್ಷಿಕೆಗಳಡಿ ಎರಡನೇ ಕಂತಿನ ಅನುದಾನವಾಗಿ ರೂ.10.25ಲಕ್ಷ (ಹತ್ತು ಲಕ್ಷದ ಇಪ್ಪತ್ತೈದು ಸಾವಿರ ರೂಪಾಯಿಗಳು ಮಾತ್ರ) ಗಳನ್ನು ಈ ಕೆಳಕಂಡ ಷರತ್ತಿಗೆಗೊಳಪಟ್ಟು ಮುಖ್ಯಸಂಪಾದಕರು, ಕನಾಟಕ ಗ್ಯಾಸೆಟಿಯರ್ ಇಲಾಖೆ ಇವರಿಗೆ ಅನುದಾನ ಬಿಡುಗಡೆ ಮಾಡಲು ಸರ್ಕಾರದ ಮಂಜೂರಾತಿ ನೀಡಿದೆ.

(ರೂ. ಲಕ್ಷಗಳಲ್ಲಿ)

| ಕ್ರ.ಸಂ. | ಲೆಕ್ಕಶೀರ್ಷಿಕೆ ಅಭಿಯಾನ ಸಂಖ್ಯೆ ಇಲಾಖೆ ಮತ್ತು ಪಾಲಿನ ಸಂಕೇತ | ಬಿಡುಗಡೆ ಮಾಡಬೇಕಾದ ಎರಡನೇ ಕಂತಿನ ಅನುದಾನ |
|---|---|---|
| | **3454-02-110-0-01 ಜಿಲ್ಲಾ ಗ್ಯಾಸೆಟಿಯರ್ ಪರಿಷ್ಕರಣೆ** | |
| 1 | 051-ಸಾಮಾನ್ಯ ವೆಚ್ಚಗಳು | 1.50 |
| 2 | 052-ದೂರವಾಣಿ ವೆಚ್ಚಗಳು | 0.50 |
| 3 | 071-ಕಟ್ಟಡ ವೆಚ್ಚಗಳು | 7.50 |
| 4 | 195-ಸಾರಿಗೆ ವೆಚ್ಚಗಳು | 0.75 |
| | ಒಟ್ಟು | 10.25 |

<u>ಷರತ್ತುಗಳು</u>

1. 2020–21ನೇ ಸಾಲಿನ ಪ್ರಾಧಿಕಾರಕ್ಕೆ ಆಯವ್ಯಯದಲ್ಲಿ ಮೀಸಲಿರಿಸಿದ ಅನುದಾನ ಎಷ್ಟು ಸರ್ಕಾರದಿಂದ ಅನುಮೋದಿತ ಕ್ರಿಯಾ ಯೋಜನೆಯಂತೆ ಹಣ ಬಳಕೆ ಪ್ರಮಾಣ ಪತ್ರವನ್ನು ವಿವರವಾಗಿ ಸಲ್ಲಿಸುವುದು (ಯಾವ ಯಾವ ಕಾರ್ಯಕ್ರಮಗಳಿಗೆ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ ಪರಿಪೂರ್ಣ ವಿವರ).
2. ಸದರಿ ಅನುದಾನಕ್ಕೆ ಸಂಬಂಧಿಸಿದಂತೆ ಆಡಿಟ್ ಮಾಡಲಾಗಿದೆಯೇ ಮಾಡಿದಲ್ಲಿ ಸಲ್ಲಿಸುವುದು (ಮಾಡದೇ ಇದ್ದಲ್ಲಿ ಆಡಿಟ್ ಮಾಡಿಸುವ ಷರತ್ತಿಗೆಗೊಳಪಟ್ಟು ಪ್ರಸ್ತಾವನೆ ಸಲ್ಲಿಸುವುದು).
3. 2020–21ನೇ ಸಾಲಿನ ಅನುಮೋದಿತ ಕ್ರಿಯಾ ಯೋಜನೆಯಂತೆ ಉಪಯೋಗವಾದ ಹಣದಲ್ಲಿ ಯಾವ ಯಾವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ/ಮಾಡಲಾಗಿದೆ ಎಂಬುದರ ಬಗ್ಗೆ ಗ್ಯಾಸೆಟಿಯರ್ ಇಲಾಖೆಯ ವೆಬ್‌ಸೈಟ್‌ನಲ್ಲಿ ಅಪ್‌ಲೋಡ್ ಮಾಡಲಾಗಿದೆಯೇ. ಒಂದು ವೇಳೆ ಮಾಡದಿದ್ದಲ್ಲಿ ಎಷ್ಟು ದಿನಗಳೊಳಗಾಗಿ ಮಾಡಲಾಗುವುದು ಎಂಬ ಷರತ್ತಿಗೆ ಒಳಪಟ್ಟು ಪ್ರಸ್ತಾವನೆಯನ್ನು ಸಲ್ಲಿಸುವುದು.
4. 2019–20ನೇ ಸಾಲಿನ ಆಯವ್ಯಯದಲ್ಲಿ ಲೇಖಾನುದಾನದ ಮಿತಿಯೊಳಗೆ ಅನುದಾನವನ್ನು ವೆಚ್ಚ ಮಾಡಲು ಕ್ರಮವಹಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ 02 ಟಿಎಫ್‌ಪಿ 2020, ದಿನಾಂಕ: 30.05.2020 ಮತ್ತು ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ: ಆಇ ವೆಚ್ಚ–7/2020, ದಿನಾಂಕ: 30.05.2020 ರಲ್ಲಿ ಇಲಾಖಾ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಲಾಗಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

10/9/20
(ಪಿ.ಎಸ್. ಮಾಲತಿ)
ಸರ್ಕಾರದ ಉಪ ಕಾರ್ಯದರ್ಶಿ,
ಕನ್ನಡ, ಸಂಸ್ಕೃತಿ ಮತ್ತು ವಾರ್ತಾ ಇಲಾಖೆ.

<u>ಪ್ರತಿ:</u>

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್.ಎಸ್.ಎ), (ಇ & ಆರ್.ಎಸ್.ಇ)ಕರ್ನಾಟಕ, ಹೊಸ ಕಟ್ಟಡ "ಆಡಿಟ್ ಭವನ", ಅಂಚೆ ಪಟ್ಟಿಗೆ ಸಂಖ್ಯೆ:5398, ಬೆಂಗಳೂರು–560001.

3. ಮುಖ್ಯಸಂಪಾದಕರು, ಕರ್ನಾಟಕ ಗ್ಯಾಸೆಟಿಯರ್ ಇಲಾಖೆ, ಕಾವೇರಿಭವನ, ಬೆಂಗಳೂರು.
4. ನಿರ್ದೇಶಕರು, ಖಜಾನೆ ಇಲಾಖೆ, ವಿ.ವಿ. ಗೋಪುರ, ಬೆಂಗಳೂರು.
5. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-7), ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಕಾರ್ಯದರ್ಶಿಗಳ ಆಪ್ತ ಶಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ವಿಕಾಸಸೌಧ, ಬೆಂಗಳೂರು.
7. ಸರ್ಕಾರದ ಉಪಕಾರ್ಯದರ್ಶಿಯವರ ಆಪ್ತ ಶಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ವಿಕಾಸಸೌಧ, ಬೆಂಗಳೂರು.
8. ಸಮನ್ವಯ ಶಾಖೆ/ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.